# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 187 (274) |
| ಉತ್ತರಿಸುವ ದಿನಾಂಕ | 17-07-2019 |
| ಮಾನ್ಯ ಸದಸ್ಯರ ಹೆಸರು | ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೆಂಗಳೂರು ನಗರದಲ್ಲಿನ ಸ್ವತ್ತುಗಳು ಒಬ್ಬರಿಂದ ಒಬ್ಬರಿಗೆ ಮಾರಾಟವಾದ ಸಂದರ್ಭದಲ್ಲಿ ಉಪ ನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿಯಾಗುತ್ತಿದ್ದು, ಹೀಗೆ ನೋಂದಣಿಯಾದ ದತ್ತಾಂಶಗಳು ಇಲಾಖೆಯ ಸರ್ವರ್‌ನಲ್ಲಿ ಸಂಗ್ರಹಿಸಲ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ನೋಂದಣಿಯಾದ ದಸ್ತಾವೇಜುಗಳ ದತ್ತಾಂಶವನ್ನು ಇಲಾಖೆಯ ಸರ್ವರ್‌ನಲ್ಲಿ ಸಂಗ್ರಹಿಸಲಾಗುತ್ತದೆ. |
| ಆ | ಈ ರೀತಿ ಸಂಗ್ರಹಿಸಲಾದ ದತ್ತಾಂಶಗಳನ್ನು ಕೆಲವರು ಇಂಟರ್‌ನೆಟ್ ಹ್ಯಾಕ್ ಮಾಡಿ ನಿವೇಶನ ಸಂಖ್ಯೆಗಳನ್ನು ತಿದ್ದಿ, ನಕಲಿ ದಾಖಲೆಗಳನ್ನು ಸೃಷ್ಟಿಸಿ, ಬೇರೆಯವರಿಗೆ ಮಾರಾಟ ಮಾಡಿರುವ ಪ್ರಕರಣಗಳು ಬೆಂಗಳೂರು ನಗರದಲ್ಲಿ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಇ | ಗಮನಕ್ಕೆ ಬಂದಿದ್ದಲ್ಲಿ, ಸರ್ಕಾರ ಸಂಬಂಧಪಟ್ಟ ವ್ಯಕ್ತಿಗಳ ಮೇಲೆ ದಾಖಲಿಸಿರುವ ಪ್ರಕರಣಗಳೆಷ್ಟು ಹಾಗೂ ಕೈಗೊಂಡಿರುವ ಕ್ರಮಗಳೇನು; | ಅನ್ವಯಿಸುವುದಿಲ್ಲ |
| ಈ | ಇಂತಹ ಪ್ರಕರಣಗಳಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ಹಾನಿ ಎಷ್ಟು? | ಸರ್ಕಾರದ ಬೊಕ್ಕಸಕ್ಕೆ ಯಾವುದೇ ಹಾನಿ ಉಂಟಾಗಿರುವುದಿಲ್ಲ. |

ಸಂಖ್ಯೆ: ಕಂಇ/ಎಂಎನ್‌ಎಸ್‌ಎ/15/2019

(ಆರ್.ವಿ.ದೇಶಪಾಂಡೆ)
ಕಂದಾಯ ಸಚಿವರು